# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816 - 2255850, 2273511 ಫ್ಯಾಕ್ಸ್: 0816-2270719

ಸಂಖ್ಯೆ:ತುವಿ: ಪ.ವಿ:ವಿ.ವಿ.-03-2023-24:/ 578

ದಿನಾಂಕ: 10.10.2023

## ಸುತ್ತೋಲೆ

ವಿಷಯ: ವಿವಿಧ ಸ್ನಾತಕ ಪದವಿ ಪರೀಕ್ಷೆಗಳ ಮೌಲ್ಯಮಾಪನ ಕಾರ್ಯದಲ್ಲಿ ಅಧ್ಯಾಪಕರುಗಳು ಭಾಗವಹಿಸುವ ಕುರಿತು.

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23 ನೇ ಸಾಲಿನ ಆಗಸ್ಟ್/ಸೆಪ್ಟೆಂಬರ್-2023 ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕ ಪದವಿಗಳ ಎನ್‌ಇಪಿ ಮತ್ತು ಸಿಬಿಸಿಎಸ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಕೆಳಕಂಡ ವಿಷಯಗಳ ಮೌಲ್ಯಮಾಪನ ಕಾರ್ಯವು ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ, ತುಮಕೂರು ಇಲ್ಲಿ ಪ್ರಾರಂಭವಾಗುತ್ತಿವೆ:

| ಕ್ರಮ ಸಂಖ್ಯೆ | ವಿಷಯ | ಮೌಲ್ಯಮಾಪನ ಪ್ರಾರಂಭವಾಗುವ ದಿನಾಂಕ |
|---|---|---|
| 1. | ಮನೋವಿಜ್ಞಾನ, ಭೂಗೋಳಶಾಸ್ತ್ರ<br>ಎನ್.ಸಿ.ಸಿ, ಬಿ.ವಿ.ಎ<br>ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ | **10.10.2023**, ಮಂಗಳವಾರ |

ಆದುದರಿಂದ ತಮ್ಮ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೇಲ್ಕಂಡ ವಿಷಯದ ಸಂಬಂಧಪಟ್ಟ ಎಲ್ಲಾ ಅರ್ಹ ಅಧ್ಯಾಪಕರುಗಳಿಗೆ (ಯು.ಜಿ.ಸಿ./ಯು.ಜಿ.ಸಿ ಯೇತರ/ಅತಿಥಿ ಉಪನ್ಯಾಸಕರು) ಮೌಲ್ಯಮಾಪನ ಕಾರ್ಯದಲ್ಲಿ ಕಡ್ಡಾಯವಾಗಿ ಭಾಗವಹಿಸಲು ಸೂಚಿಸುವಂತೆ ಈ ಮೂಲಕ ತಿಳಿಸಲಾಗಿದೆ.

**ಸೂಚನೆ:**

1. ಸಂಬಂಧಪಟ್ಟ ಪರೀಕ್ಷಾ ಮಂಡಳಿಯ ಅಧ್ಯಕ್ಷರುಗಳು ಕೂಡಲೇ ಮೌಲ್ಯಮಾಪನವನ್ನು ಮಾಡಿಸುವ ಸಂಬಂಧ ಅಗತ್ಯ ಕ್ರಮವಹಿಸುವುದು. ಮೌಲ್ಯಮಾಪನ ಕಾರ್ಯವನ್ನು ನಿರಾಕರಿಸುವ ಅಧ್ಯಾಪಕರುಗಳ ಪಟ್ಟಿಯನ್ನು ಕುಲಸಚಿವರು(ಪರೀಕ್ಷಾಂಗ) ಇವರಿಗೆ ಸಲ್ಲಿಸುವುದು.
2. ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸುವ ಎಲ್ಲಾ ಅಧ್ಯಾಪಕರು ಮೌಲ್ಯಮಾಪನ ವೇಳೆಯಲ್ಲಿ ಮೊಬೈಲ್ ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

## ವಿಶೇಷ ಸೂಚನೆ:

1. ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ನಿರ್ದೇಶನದಂತೆ, ಯುಜಿಸಿ ವೇತನ ಪಡೆಯುತ್ತಿರುವ ಎಲ್ಲಾ ಅಧ್ಯಾಪಕರುಗಳು ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗುವಂತೆ ಸೂಚಿಸಿ, ಲಿಖಿತ ರೂಪದಲ್ಲಿ ಅನುಮತಿ ಪಡೆಯದೆ ಗೈರು ಹಾಜರಾಗುವ ಅಧ್ಯಾಪಕರುಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು. ಕಾಲೇಜಿನ ಪ್ರಾಂಶುಪಾಲರುಗಳು ತಮ್ಮ ಅಧೀನದಲ್ಲಿ ಬರುವಂತಹ ಎಲ್ಲಾ ಅಧ್ಯಾಪಕರುಗಳು ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸುವಂತೆ ಕ್ರಮವಹಿಸುವುದು.
2. ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸದಿರುವ ಅಧ್ಯಾಪಕರುಗಳ ಕಾಲೇಜನ್ನು ಕಪ್ಪು ಪಟ್ಟಿಗೆ ಸೇರಿಸಲಾಗುವುದು ಹಾಗೂ ಸದರಿ ಕಾಲೇಜುಗಳ ಫಲಿತಾಂಶವನ್ನು ತಡೆ ಹಿಡಿಯಲಾಗುವುದು.
3. **ಸಂಬಂಧಪಟ್ಟ ಪರೀಕ್ಷಾ ಮಂಡಳಿ ಅಧ್ಯಕ್ಷರುಗಳು ಮೌಲ್ಯಮಾಪನ ಕಾರ್ಯ ಪ್ರಾರಂಭವಾಗುವ ಒಂದು ದಿನ ಮುಂಚಿತವಾಗಿ ಪರೀಕ್ಷಾಂಗಕ್ಕೆ ಭೇಟಿ ನೀಡಿ ಮೌಲ್ಯಮಾಪನಕ್ಕೆ ಸಿದ್ಧಗೊಂಡಿರುವ ಪ್ರಶ್ನೆಪತ್ರಿಕೆ ಕೋಡ್‌ಗಳನುಸಾರ ಉತ್ತರ ಪತ್ರಿಕೆಗಳ ಮಾಹಿತಿ ಪಡೆಯುವುದು ಹಾಗೂ ಮೊದಲು ಅಂತಿಮ ವರ್ಷದ ಮೌಲ್ಯಮಾಪನ ಕಾರ್ಯವನ್ನು ಪೂರೈಸುವುದು**

10/10/23

ಕುಲಸಚಿವರು (ಪರೀಕ್ಷಾಂಗ)

ಗೆ,

1. ಪ್ರಾಂಶುಪಾಲರುಗಳು, ಘಟಕ ಕಾಲೇಜುಗಳು/ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಅಧ್ಯಕ್ಷರು, ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ಸ್ನಾತಕ ವಿಷಯಗಳ ಪರೀಕ್ಷಾ ಮಂಡಳಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.